**Bangalore**
**Regional News**
**17.09.2025 / 6.40 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

1. ಬೆಂಗಳೂರಿನಲ್ಲಿ ಹದಗೆಟ್ಟ ರಸ್ತೆ: ರಾಜಧಾನಿ ತೊರೆಯಲು ನಿರ್ಧರಿಸಿದ ಖಾಸಗಿ ಕಂಪನಿ : ಉದ್ಯಮಿಗಳು ಕಳವಳ
2. ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಮತ್ತೊಮ್ಮೆ ಕೇಂದ್ರಕ್ಕೆ ಶಿಫಾರಸ್ಸು - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
3. ರಾಜ್ಯದೆಲ್ಲೆಡೆ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ - ಕ್ಷಯಮುಕ್ತ ಭಾರತಕ್ಕೆ ಸಚಿವ ಪ್ರಲ್ಹಾದ್ ಜೋಶಿ ಕರೆ
4. ರಾಜ್ಯಕ್ಕೆ ಬಾಕಿ ಇರುವ ಯೂರಿಯಾ ತ್ವರಿತ ಬಿಡುಗಡೆಗೆ ರಣದೀಪ್ ಸಿಂಗ್ ಸುರ್ಜೆವಾಲ ಕೇಂದ್ರ ಸರ್ಕಾರಕ್ಕೆ ಒತ್ತಾಯ
5. ಧರ್ಮಸ್ಥಳದ ಬಂಗ್ಲೆಗುಡ್ಡ ಪ್ರದೇಶದಲ್ಲಿ ಎಸ್ ಐ. ಟಿ. ಯಿಂದ ಮತ್ತೆ ಉತ್ಖನನ - ಮೂಳೆ, ಮಣ್ಣು ಸಂಗ್ರಹ

<><><><>

ಕಳಪೆ ರಸ್ತೆ ಹಾಗೂ ಮೂಲಭೂತ ಸೌಕರ್ಯದ ಕೊರತೆ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ಬ್ಲಾಕ್‌ಬಕ್ ಕಂಪನಿಯು ಹೊರ ಹೋಗಲು ನಿರ್ಧರಿಸಿದೆ. ಕಂಪನಿಯ ಮುಖ್ಯಸ್ಥರು ಬೆಂಗಳೂರಿನಲ್ಲಿ ಮುಂದುವರೆಯುವುದು ತುಂಬಾ ಕಷ್ಟಕರವಾಗಿದ್ದು, ಹೊರಹೋಗಲು ನಿರ್ಧರಿಸಿರುವುದಾಗಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಈ ಬಗ್ಗೆ ಉದ್ಯಮಿಗಳಾದ ಮೋಹನ್ ದಾಸ್ ಪೈ ಮತ್ತು ಬಯೋಕಾನ್ ಸಂಸ್ಥಾಪಕಿ ಕಿರಣ್ ಮಜುಂದಾರ್-ಶಾ ಕಳವಳ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಶೀಘ್ರವೇ ಬೆಂಗಳೂರಿನ ರಸ್ತೆಗಳನ್ನು ದುರಸ್ಥಿಗೊಳಿಸುವಂತೆ ಸರ್ಕಾರದ ಬಳಿ ಮನವಿ ಮಾಡಿದ್ದಾರೆ. ಬೆಂಗಳೂರಿನ ಗುಂಡಿಗಳನ್ನು ನವೆಂಬರ್ ಒಳಗೆ ಮುಚ್ಚುವಂತೆ ಗುತ್ತಿಗೆದಾರರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಂತಿಮ ಗಡುವು ನೀಡಿದ್ದಾರೆ. ಆದಷ್ಟು ಬೇಗ ರಸ್ತೆ ಗುಂಡಿಗಳಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮುಕ್ತಿ ನೀಡಲಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಬೆಂಗಳೂರಿನಿಂದ ಉದ್ಯಮಿಗಳು ಹೊರ ಹೋಗುವ ಕುರಿತಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಿಂಗ್ ರಸ್ತೆಯಲ್ಲೂ ವಾಹನ ಚಲಾಯಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

<><><>

ಇದೇ ೨೨ರಿಂದ ಅಕ್ಟೋಬರ್ ೭ ರವರೆಗೆ ನಡೆಯಲಿರುವ ಜಾತಿ ಜನಗಣತಿ ಸಮೀಕ್ಷೆ ವೇಳೆ ಜಾತಿ ಹೆಸರನ್ನು ಕುರುಬ ಎಂದು ಬರೆಸಿದರೆ ಮಾತ್ರ ಸಮಾಜದ ಸ್ಥಿತಿ ಗತಿಯ ಸ್ಪಷ್ಟ ಚಿತ್ರಣ ಸಿಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಲಬುರ್ಗಿಯಲ್ಲಿಂದು ರಾಯಣ್ಣ ಮೂರ್ತಿ ಅನಾವರಣಗೊಳಿಸಿ, ಬಸ್ ನಿಲ್ದಾಣಕ್ಕೆ ಸಂಗೊಳ್ಳಿ ರಾಯಣ್ಣರ ಹೆಸರು ನಾಮಕರಣ ಮಾಡಿ ಮಾತನಾಡಿದ ಅವರು, ಕುರುಬ ಸಮುದಾಯವನ್ನು ಪರಿಶಿಷ್ಠ ಪಂಗಡಕ್ಕೆ ಸೇರಿಸಲು ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿತ್ತು. ಇದನ್ನು ಕೇಂದ್ರ ಸರ್ಕಾರ ವಾಪಾಸ್ ಕಳುಹಿಸಿದೆ. ಹೀಗಾಗಿ ಮತ್ತೆ ಹೆಚ್ಚುವರಿ ಅಂಕಿ ಅಂಶಗಳು ಮತ್ತು ದಾಖಲೆಗಳ ಸಮೇತ ಕೇಂದ್ರಕ್ಕೆ ಶಿಫಾರಸ್ಸು ಕಳುಹಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಸಮಾರಂಭದಲ್ಲಿ ಸಂವಿಧಾನದ ರಕ್ಷಣೆ ಒಂದೆಡೆಯಾದರೆ ಮನುಸ್ಮೃತಿ ಜಾರಿಗೆ ಮತ್ತೊಂದು ಕಡೆ ಪ್ರಯತ್ನ ನಡೆಯುತ್ತಿದೆ ಎಂದು ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದರು. ಸಚಿವ ಭೈರತಿ ಸುರೇಶ್ ಮಾತನಾಡಿ ಶಿಕ್ಷಣದಿಂದಲೇ ಅಭಿವೃದ್ಧಿ ಸಾಧ್ಯ ಕುರುಬ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಕರೆ ನೀಡಿದರು.

<><><>

ಭಾರತ ದೇಶ ಪೋಲೀಯೋ ಮುಕ್ತ ರಾಷ್ಟ್ರವಾದಂತೆ ೨೦೨೬ರ ಮಾರ್ಚ್ ತಿಂಗಳೊಳಗೆ ಕ್ಷಯ ಮುಕ್ತ ರಾಷ್ಟ್ರವಾಗಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ ನೀಡಿದ್ದಾರೆ. ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕು ಆಸ್ಪತ್ರೆ ಆವರಣದಲ್ಲಿ "ಆರೋಗ್ಯವಂತ ಮಹಿಳೆ, ಸಶಕ್ತ ಪರಿವಾರ ಅಭಿಯಾನ ಉದ್ಘಾಟಿಸಿ ಮಾತನಾಡಿದ ಅವರು, ಧಾರವಾಡ ಜಿಲ್ಲೆಯನ್ನು ದೇಶದಲ್ಲೇ ಮೊದಲ ಕ್ಷಯ ಮುಕ್ತ ಜಿಲ್ಲೆಯಾಗಿಸಲು ಪ್ರತಿಯೊಬ್ಬರೂ ಪಣತೊಡುವಂತೆ ತಿಳಿಸಿದ್ದಾರೆ. ಮುಂದಿನ ೧೫ ದಿನಗಳ ಕಾಲ ತಾವು ವಾಸಿಸುವ ಬಡಾವಣೆ, ಶಾಲೆ, ಕಾಲೇಜು, ಉದ್ಯಾನವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದ್ದಾರೆ. ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ ಕಾರ್ಯಕ್ರಮದ ಮೂಲಕ ರಕ್ತದೊತ್ತಡ, ಡಯಾಬಿಟಿಸ್, ಬಾಯಿಯ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಾಶಯ ಕ್ಯಾನ್ಸರ್, ರಕ್ತಹೀನತೆ ಸೇರಿದಂತೆ ಹಲವಾರು ರೋಗಗಳ ತಪಾಸಣೆ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯದ ಹಲವೆಡೆ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಸಂಸದ ಡಾ ಮಂಜುನಾಥ್ ರಾಮನಗರ ತಾಲ್ಲೂಕಿನ ಬಿಡದಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರಿಗೆ ಉಚಿತ ತಪಾಸಣೆ, ರಕ್ತದೊತ್ತಡ, ಸಕ್ಕರೆ ಖಾಯಿಲೆ, ಹಿಮೋಗ್ಲೋಬಿನ್ ಪರೀಕ್ಷೆ ಸೇರಿದಂತೆ ಸ್ತನ ಮತ್ತು ಗರ್ಭಾಶಯ ಕ್ಯಾನ್ಸರ್ ತಪಾಸಣೆ ನಡೆಸಲಾಯಿತು. ಮಹಿಳೆಯರ ಪೋಷಕಾಂಶ ಕೊರತೆ ನಿವಾರಣೆಗಾಗಿ ಪೌಷ್ಟಿಕ ಆಹಾರ ಕುರಿತು ಅರಿವು ಮೂಡಿಸಲಾಯಿತು. ಅನೀಮಿಯಾ ಮುಕ್ತ ಭಾರತ ಕಾರ್ಯಕ್ರಮದಡಿ ಪೌಷ್ಟಿಕ ಕಿಟ್‌ಗಳನ್ನು

ವಿತರಿಸಲಾಯಿತು. ಇನ್ನೊಂದೆಡೆ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಲ್ಲಿ ವಿಶೇಷ ಆರೋಗ್ಯ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ನಿಖಿಲ್ ಗಜರಾಜ್ ಮತ್ತು ರಾಷ್ಟ್ರೀಯ ಆರೋಗ್ಯ ಮಿಷನ್ ನಿರ್ದೇಶಕಿ ಡಾ. ಅವಿನಾಶ್ ಮೆನನ್ ಚಾಲನೆ ನೀಡಿದರು.

<><><>

ರಾಜ್ಯದ ರೈತರಿಗೆ ಬಾಕಿ ಇರುವ ೩.೩೬ ಲಕ್ಷ ಮೆಟ್ರಿಕ್ ಟನ್ ಯೂರಿಯಾವನ್ನು ತ್ವರಿತವಾಗಿ ಬಿಡುಗಡೆ ಮಾಡುವಂತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದು ಬಾಕಿ ಇರುವ ಯೂರಿಯಾ ರಸಗೊಬ್ಬರವನ್ನು ತಕ್ಷಣವೇ ಪೂರೈಸುವಂತೆ ಒತ್ತಾಯಿಸಿದ್ದಾರೆ. ೨೦೨೫-೨೬ನೇ ಸಾಲಿಗೆ ರಾಜ್ಯವು ೧೧೪.೪೦ ಲಕ್ಷ ಹೆಕ್ಟೇರ್‌ಗಿಂತ ಹೆಚ್ಚು ಬಿತ್ತನೆ ಗುರಿ ಹೊಂದಿದೆ. ಜೊತೆಗೆ ೧೬೦.೬೮ ಲಕ್ಷ ಟನ್ ಆಹಾರ ಧಾನ್ಯಗಳು ಮತ್ತು ಎಣ್ಣೆಕಾಳುಗಳನ್ನು ಉತ್ಪಾದಿಸುವ ಗುರಿಯನ್ನು ಹೊಂದಲಾಗಿದೆ. ಹಿಂಗಾರು ಋತುವಿನಲ್ಲಿ ಗೊಬ್ಬರಗಳಿಗೆ ಅಂದಾಜು ಬೇಡಿಕೆ ೨೬.೭೭ ಲಕ್ಷ ಮೆಟ್ರಿಕ್ ಟನ್‌ಗಳಷ್ಟಿದ್ದು, ೩.೩೬ ಲಕ್ಷ ಮೆಟ್ರಿಕ್ ಟನ್ ಯೂರಿಯಾ ಕೊರತೆಯಿದೆ ಎಂದು ತಿಳಿಸಿದ್ದಾರೆ.

<><><>

ಧರ್ಮಸ್ಥಳದ ಬಂಗ್ಲೆಗುಡ್ಡ ಪ್ರದೇಶದಲ್ಲಿ ವಿಶೇಷ ತನಿಖಾ ತಂಡ ಮತ್ತೆ ಉತ್ಖನನ ಆರಂಭಿಸಿದೆ. ಶಂಕಿತ ಸಮಾಧಿಗಳಿಂದ ಮೂಳೆ ಮತ್ತು ಮಣ್ಣು ಸಂಗ್ರಹ ಮಾಡಿದೆ. ಸುಮಾರು ೫೦ ರಿಂದ ೬೦ ಜನರ ತಂಡವು ಉತ್ಖನನ ನಡೆಸುತ್ತಿದ್ದು, ಎಸ್. ಐ.ಟಿ. ತಂಡಗಳು ಮೇಲ್ವಿಚಾರಣೆ ನಡೆಸುತ್ತಿವೆ. ಈ ಹಿಂದೆ ಗುರುತಿಸಿದ ೧೧ ಮತ್ತು ೧೨ನೇ ಸಮಾಧಿಗಳ ನಡುವೆ ಉತ್ಖನನ ಕಾರ್ಯ ನಡೆಯುತ್ತಿದೆ. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಿನ್ನೆ ಎಸ್.ಐ.ಟಿ. ಮುಖ್ಯಸ್ಥ ಪ್ರಣಬ್ ಮೊಹಂತಿ ಭೇಟಿ ಮಾಡಿ ತನಿಖೆ ಕುರಿತು ವಿವರಿಸಿದ್ದಾರೆ.

<><><>

ದೇಶವನ್ನು ಸುಭದ್ರ ಹಾಗೂ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸಲು ಎಲ್ಲರೂ ಸಹಕರಿಸಬೇಕು ಎಂದು ಕೇಂದ್ರ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಕರೆ ನೀಡಿದ್ದಾರೆ. ತುಮಕೂರು ನಗರದಲ್ಲಿ ಸ್ವಚ್ಛತಾ ಹೀ ಸೇವಾದ ಅಂಗವಾಗಿ ವಿವಿಧ ಸೇವಾ ಚಟುವಟಿಕೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರ ದೂರದೃಷ್ಟಿಯಿಂದ ದೇಶದ ೧೪೦ ಕೋಟಿ ಜನರ ಕನಸು ನನಸಾಗುತ್ತಿದೆ ಎಂದು ತಿಳಿಸಿದ್ದಾರೆ. ಬಳಿಕ ಅವರು, ನಗರದ ರೈಲು ನಿಲ್ದಾಣದಲ್ಲಿ ಸ್ವಚ್ಛತಾ ಕಾರ್ಯಕ್ರಮ, ಪೌರಕಾರ್ಮಿಕರಿಗೆ ಸನ್ಮಾನ, ಅಂಧ ಮಕ್ಕಳಿಗೆ ಬ್ರೈಲ್ ಸ್ಲೇಟ್ ವಿತರಣೆ ಮಾಡಿದರು. ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗವು

ಇಂದು ಸ್ವಚ್ಛೋತ್ಸವ ಧ್ಯೇಯದೊಂದಿಗೆ  ಸ್ವಚ್ಛತಾ ಹಿ ಸೇವಾ ಸ್ವಚ್ಛತಾ ಅಭಿಯಾ ಆರಂಭಿಸಿತು. ಅಭಿಯಾನವನ್ನು ಇಂದಿನಿಂದ ಅಕ್ಟೋಬರ್ ೨, ೨೦೨೫ ರವರೆಗೆ ಬೆಂಗಳೂರು ವಿಭಾಗದಾದ್ಯಂತ ಹಮ್ಮಿಕೊಳ್ಳಲಾಗಿದೆ. ಸ್ವಚ್ಛತಾ ಹೀ ಸೇವಾ ಅಭಿಯಾನದ ಭಾಗವಾಗಿ, ರೈಲ್ವೆ ನಿಲ್ದಾಣಗಳು, ರೈಲುಗಳು, ಕಚೇರಿಗಳು ಮತ್ತು ಹಳಿಗಳಲ್ಲಿ ಸಾಮೂಹಿಕ ಸ್ವಚ್ಛತಾ ಅಭಿಯಾನಗಳು, ಸ್ವಚ್ಛತಾ ಸಿಬ್ಬಂದಿಗೆ ಆರೋಗ್ಯ ತಪಾಸಣೆ ನಡೆಯಲಿದೆ.

<><><><>

ಸೇವಾ ಪಾಕ್ಷಿಕ ಅಭಿಯಾನದಡಿ ಬೆಂಗಳೂರಿನಲ್ಲಿಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ೭೫ ಪೌರ ಕಾರ್ಮಿಕರನ್ನು ಸನ್ಮಾನಿಸಿದರು. ಬೆಂಗಳೂರು ದಕ್ಷಿಣದಲ್ಲಿ ವಿವಿಧ ಸೇವಾ ಚಟುವಟಿಕೆಗಳ ಕಾರ್ಯಕ್ರಮವನ್ನು ಪ್ರತಿಪಕ್ಷ ನಾಯಕ ಆರ್.ಅಶೋಕ ಉದ್ಘಾಟಿಸಿದರು. ಈ ನಡುವೆ ನಾಳೆ ನಡೆಯಲಿರುವ ವಿವಿಧ ಬಿಜೆಪಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲು  ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಬೆಂಗಳೂರಿಗೆ ಆಗಮಿಸಿದ್ದಾರೆ. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ದೇಶದ ಅತ್ಯಂತ ಜನಪ್ರಿಯ ನಾಯಕ ಎಂದು ಬಣ್ಣಿಸಿದ್ದಾರೆ.

<><><><>

ರಾಷ್ಟ್ರ  ಪ್ರಶಸ್ತಿ ವಿಜೇತ ಚಲನಚಿತ್ರ "ಚಲೋ ಜೀತೇ ಹೈ ಇಂದಿನಿಂದ ಅಕ್ಟೋಬರ್ ೨ರವರೆಗೆ ಮರು-ಬಿಡುಗಡೆಗೆ ಸಿದ್ಧವಾಗಿದೆ. ೨೦೧೮ರ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಕಿರು ಚಿತ್ರಗಳಲ್ಲಿ ಒಂದಾದ ಹಾಗೂ ವಿಮರ್ಶಾತ್ಮಕವಾಗಿ ಮೆಚ್ಚುಗೆ ಪಡೆದ ಈ ಚಲನಚಿತ್ರವು ಲಕ್ಷಾಂತರ ಶಾಲೆಗಳು ಸೇರಿದಂತೆ ದೇಶಾದ್ಯಂತ ಸುಮಾರು ೫೦೦ ಚಿತ್ರಮಂದಿರಗಳಲ್ಲಿ ಪ್ರದರ್ಶನಗೊಳ್ಳಲಿದೆ. ಈ ಉಪಕ್ರಮದ ಅಡಿಯಲ್ಲಿ, ಶಾಲೆಗಳು ಮತ್ತು ಸಮಾಜದ 'ಮೂಕ ವೀರರು'  ಎಂದು ಪರಿಗಣಿಸಲ್ಪಟ್ಟಿರುವ - ಕಾವಲುಗಾರರು, ಶುಚಿಗೊಳಿಸುವ ಸಿಬ್ಬಂದಿ, ಚಾಲಕರು, ಜವಾನರು ಮತ್ತು ದೈನಂದಿನ ಜೀವನದ ಸುಗಮ ಕಾರ್ಯನಿರ್ವಹಣೆಗೆ ಸದ್ದಿಲ್ಲದೆ ಕೊಡುಗೆ ನೀಡುವ ಇತರರನ್ನು ಗೌರವಿಸಲಾಗುತ್ತದೆ. ಉಡುಪಿ ಜಿಲ್ಲೆ ಮಣಿಪಾಲದ ಸೆಂಟ್ರಲ್ ಸಿನೆಮಾ ಐನಾಕ್ಸ್ ಚಿತ್ರಮಂದಿರದಲ್ಲಿ ಚಿತ್ರ ಪ್ರದರ್ಶನಗೊಳ್ಳುತ್ತಿದೆ

<><><><>

ಬೆಂಗಳೂರಿನ ಕೆಸಿಡಿಸಿ ಘಟಕದಲ್ಲಿರುವ ಅನುಪಯುಕ್ತ ತ್ಯಾಜ್ಯವನ್ನು ಕೂಡಲೆ ವಿಲೇವಾರಿ ಮಾಡಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಪಶ್ಚಿಮ ಹಾಗೂ ದಕ್ಷಿಣ ನಗರ ಪಾಲಿಕೆಯಲ್ಲಿ ಕಛೇರಿಗಳ ಕಟ್ಟಡ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ ವೇಳೆ ಮಾತನಾಡಿದ ಅವರು, ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಪ್ರತಿನಿತ್ಯ ೩೦೦ ಮೆಟ್ರಿಕ್ ಟನ್ ತ್ಯಾಜ್ಯ ಸಂಸ್ಕರಣೆ ಮಾಡಬಹುದಾಗಿದೆ ಎಂದು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>